ಸನ್ಮಾನ್ಯ ಮುಖ್ಯಮಂತ್ರಿಗಳು ರವರಿಂದ "ಬಿಬಿಎಂಪಿ ಸ್ಕೌಟ್ಸ್ ಮತ್ತು ಗೈಡ್ಸ್ ಭವನ" ಉದ್ಘಾಟನೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅನುದಾನದಿಂದ ಅರಮನೆ ರಸ್ತೆಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ಕೇಂದ್ರ ಕಛೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ "ಬಿಬಿಎಂಪಿ ಸ್ಕೌಟ್ಸ್ ಮತ್ತು ಗೈಡ್ಸ್ ಭವನ"ವನ್ನು ಇಂದು ಸನ್ಮಾನ್ಯ ಮುಖ್ಯಮಂತ್ರಿಗಳು ಶ್ರೀ ಬಿ.ಎಸ್.ಯಡಿಯೂರಪ್ಪ ರವರು ಉದ್ಘಾಟಿಸಿದರು. ಈ ವೇಳೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತರು ಶ್ರೀ ಪಿ.ಜಿ.ಆರ್.ಸಿಂಧ್ಯ, ಮಾನ್ಯ ಆಡಳಿತಗಾರರು ಶ್ರೀ ಗೌರವ್ ಗುಪ್ತಾ, ಮಾನ್ಯ ಆಯುಕ್ತರು ಶ್ರೀ ಎನ್.ಮಂಜುನಾಥ್ ಪ್ರಸಾದ್, ವಿಶೇಷ ಆಯುಕ್ತರುಗಳಾದ ಶ್ರೀ ಜೆ.ಮಂಜುನಾಥ್, ಶ್ರೀ ಡಿ.ರಂದೀಪ್, ಶ್ರೀ ರವೀಂದ್ರ, ಪೂರ್ವ ವಲಯ ಜಂಟಿ ಆಯುಕ್ತರು ಶ್ರೀಮತಿ ಪಲ್ಲವಿ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ತದನಂತರ ಸ್ವಾಮಿ ವಿವೇಕಾನಂದರ 158ನೇ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮಕ್ಕೆ ಆಡಳಿತಗಾರರು ಶ್ರೀ ಗೌರವ್ ಗುಪ್ತಾ ರವರು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಆಡಳಿತಗಾರರು, ಸ್ಕೌಟ್ಸ್ ಮತ್ತು ಗೈಡ್ಸ್ ನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ 1.25 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ(ಬಿಬಿಎಂಪಿ ಸ್ಕೌಟ್ಸ್ ಮತ್ತು ಗೈಡ್ಸ್ ಭವನ)ವನ್ನು ನಿರ್ಮಿಸಲಾಗಿದೆ. ನಗರ ವ್ಯಾಪ್ತಿಯ ಸ್ಕೌಟ್ ಮತ್ತು ಗೌಡ್ಸ್‌ನಲ್ಲಿ ಸುಮಾರು 10,000 ವಿದ್ಯಾರ್ಥಿಗಳು ಹಾಗೂ 120 ಶಿಕ್ಷಕರಿದ್ದು, ಅವರಿಗೆಲ್ಲಾ ಈ ಕಟ್ಟಡ ಹೆಚ್ಚು ಅನುಕೂಲವಾಗಿದೆ.

ಸ್ವಾಮಿ ವಿವೇಕಾನಂದರ ಜನ್ಮ ದಿನವನ್ನು ರಾಷ್ಟ್ರೀಯ ಯುವ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದ್ದು, ಅವರು ನಮ್ಮೆಲ್ಲರಿಗೂ ಆದರ್ಶರಾಗಿದ್ದಾರೆ. ಸ್ಕೌಟ್ಸ್ ಮತ್ತು ಗೈಡ್ಸ್ ಗೆ ಪಾಲಿಕೆ ವತಿಯಿಂದ ಎಲ್ಲಾ ರೀತಿಯ ಸಹಾಯ ಮಾಡಲಾಗುವುದು ಎಂದು ತಿಳಿಸಿದರು.